Fax: 08282-256262
E-mail:kuvempuacademic@gmail.com

Phone No - 08282-256149
Website:www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಶೈಕ್ಷಣಿಕ ವಿಭಾಗ, ಕುವೆಂಪು ಶತಮಾನೋತ್ಸವ ಭವನ,
ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451, ಶಿವಮೊಗ್ಗ ಜಿಲ್ಲೆ.

ಸಂಖ್ಯೆ:ಕುವಿ:ಶೈವಿ:ಎಸಿ-5: 487 :2025-26

ದಿನಾಂಕ:14-05-2025

## ಸುತ್ತೋಲೆ

ವಿಷಯ: ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಟ್ಟ ಶಿವಮೊಗ್ಗ ನಗರದಲ್ಲಿರುವ ಎಲ್ಲಾ ಸ್ನಾತಕ ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ರಜೆ ಘೋಷಿಸುವ ಕುರಿತು

ಉಲ್ಲೇಖ: 1. ಜಿಲ್ಲಾಧಿಕಾರಿಗಳು, ಶಿವಮೊಗ್ಗ – ಇವರ ಪತ್ರ ಸಂಖ್ಯೆ:SMGDC-MAG3/Exam/9/2025(695786), ದಿನಾಂಕ:13-05-2025.
2. ಮಾನ್ಯ ಕುಲಪತಿಯವರ ಆದೇಶ ದಿನಾಂಕ: 14-05-2025

*****

ಉಲ್ಲೇಖಿತ(1)ರ ಜಿಲ್ಲಾಧಿಕಾರಿಗಳು, ಶಿವಮೊಗ್ಗ – ಇವರ ಪತ್ರದಲ್ಲಿನ ನಿರ್ದೇಶನದನುಸಾರ ಪ್ರಸಕ್ತ ವರ್ಷದಲ್ಲಿ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾ ಕೂಟವನ್ನು ಶಿವಮೊಗ್ಗ ಜಿಲ್ಲೆಯಲ್ಲಿ ದಿನಾಂಕ:18-05-2025 ರಿಂದ 20-05-2025ರವರೆಗೆ ಒಟ್ಟು 03 ದಿನಗಳ ಕಾಲ ಆಯೋಜಿಸಿರುವುದರಿಂದ ಸದರಿ ಕ್ರೀಡಾ ಕೂಟದಲ್ಲಿ ಭಾಗವಹಿಸುವ ರಾಜ್ಯ ಸರ್ಕಾರಿ ನೌಕರರಿಗೆ ವಸತಿ ಸೌಲಭ್ಯ ಕಲ್ಪಿಸುವ ಸಲುವಾಗಿ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಟ್ಟ ಶಿವಮೊಗ್ಗ ನಗರದಲ್ಲಿರುವ ಎಲ್ಲಾ ಸ್ನಾತಕ ಪದವಿ ಕಾಲೇಜಿನ ವಿದ್ಯಾರ್ಥಿಗಳಿಗೆ ದಿನಾಂಕ:18-05-2025 ರಿಂದ 20-05-2025ರವರೆಗೆ ಒಟ್ಟು 03 ದಿನಗಳ ಕಾಲ ರಜೆ ಘೋಷಿಸಲಾಗಿದೆ.

ಮುಂದುವರೆದಂತೆ, ಸದರಿ ಸುತ್ತೋಲೆಯೊಂದಿಗೆ ಹೆಚ್ಚಿನ ಮಾಹಿತಿಗಾಗಿ ಉಲ್ಲೇಖಿತ (1)ರ ಪತ್ರವನ್ನು ವಿಶ್ವವಿದ್ಯಾಲಯದ (www.kuvempu.ac.in) ಅಂತರ್‌ಜಾಲದಲ್ಲಿ ಪ್ರಕಟಿಸಲಾಗಿದೆ.

14/5/25
ಕುಲಸಚಿವರು
ಕುವೆಂಪು ವಿಶ್ವವಿದ್ಯಾನಿಲಯ
ಜ್ಞಾನ ಸಹ್ಯಾದ್ರಿ
ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ.
14/5/2025

ಗೆ,

ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಟ್ಟ ಶಿವಮೊಗ್ಗ ನಗರದಲ್ಲಿರುವ ಎಲ್ಲಾ ಸ್ನಾತಕ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಹಾಗೂ ಘಟಕ ಕಾಲೇಜುಗಳು, ಶಿವಮೊಗ್ಗ.

ಪ್ರತಿಗಳು:

1. ಜಿಲ್ಲಾಧಿಕಾರಿಗಳು, ಶಿವಮೊಗ್ಗ, ಶಿವಮೊಗ್ಗ ಜಿಲ್ಲೆ.
2. ಆಪ್ತ ಸಹಾಯಕರು, ಕುಲಪತಿಗಳು: ಕುಲಸಚಿವರು: ಕುಲಸಚಿವರು(ಪ): ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
3. ಕಛೇರಿ ಪ್ರತಿ.

ಕರ್ನಾಟಕಸರ್ಕಾರ

ಜಿಲ್ಲಾಧಿಕಾರಿಹಾಗೂಜಿಲ್ಲಾದಂಡಾಧಿಕಾರಿಗಳಕಾರ್ಯಾಲಯ, ಶಿವಮೊಗ್ಗಜಿಲ್ಲೆ.

OFFICE OF THE DEPUTY COMMISSIONER & DISTRICT MAGISTRATE, SHIVAMOGGA DISTRICT. SHIVAMOGGA.

ದೂರವಾಣಿ/PHONE : 08182-271101/221010/221100. ಫ್ಯಾಕ್ಸ್/FAX : 277082. ಇ-ಮೇಲ್/E-MAIL: deo.shimoga@gmail.com

ನಂ: SMGDC-MAG3/Exam/9/2025 (695786) ದಿನಾಂಕ:13.05.2025.

1. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ನವುಲೆ,ಶಿವಮೊಗ್ಗ.
2. ಕುಲಪತಿಗಳು, ಕುವೆಂಪು ವಿಶ್ವವಿದ್ಯಾನಿಲಯ, ಜ್ಞಾನ ಸಹ್ಯಾದ್ರಿ, ಶಂಕರಘಟ್ಟ, ಶಿವಮೊಗ್ಗ.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಶಿವಮೊಗ್ಗ
4. ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ,ಶಿವಮೊಗ್ಗ
5. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಶಿವಮೊಗ್ಗ
6. ಜಿಲ್ಲಾ ಅಧಿಕಾರಿ, ಅಲ್ಪಸಂಖ್ಯಾತರ ಇಲಾಖೆ, ಶಿವಮೊಗ್ಗ
7. ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಶಿವಮೊಗ್ಗ.

ಕುಲಸಚಿವರ ಆಪ್ತ ಕಾರ್ಯಾಲಯ ಸಂಖ್ಯೆ 68 ದಿನಾಂಕ 14/05/2025

ರವರಿಗೆ,

ಮಾನ್ಯರೇ,

ವಿಷಯ :- ರಾಜ್ಯಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟವನ್ನು ಹಾಗೂ ಸಾಂಸ್ಕೃತಿ ಸ್ಪರ್ಧೆಗಳು ಶಿವಮೊಗ್ಗದಲ್ಲಿ ನಡೆಯುತ್ತಿರುವ ಸಂಬಂಧ ಜಿಲ್ಲೆಯ ಎಲ್ಲಾ ಶಾಲಾ ಕಾಲೇಜು/ಹಾಸ್ಟೆಲ್ ಗಳಿಗೆ ರಜೆ ನೀಡುವ ಕುರಿತು.

ಉಲ್ಲೇಖ :- ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ, ಶಿವಮೊಗ್ಗರವರ ಪತ್ರ ಸಂಖ್ಯೆ:ಜಿ.ಇ.ಎ/2025, ದಿನಾಂಕ:13.05.2025.

*** 0 ***

ಪ್ರಸಕ್ತ ವರ್ಷದಲ್ಲಿ ಪ್ರಸ್ತುತ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾ ಕೂಟವನ್ನು ಶಿವಮೊಗ್ಗ ಜಿಲ್ಲೆಯಲ್ಲಿ ದಿನಾಂಕ:18.05.2025, 19.05.2025, 20.05.2025 ರವರೆಗೆ ಮೂರು (3) ದಿನಗಳ ಕಾಲ ಕ್ರೀಡಾ ಕೂಟವನ್ನು ಆಯೋಜಿಸಿದ್ದು, ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರರವರು ಶಿವಮೊಗ್ಗ ಜಿಲ್ಲೆಗೆ ಆಗಮಿಸಿ ಈ ಕ್ರೀಡಾಕೂಟವನ್ನು ಉದ್ಘಾಟಿಸಲಿರುತ್ತಾರೆ.

ಈ ಹಿನ್ನಲೆಯಲ್ಲಿ ಸದರಿ ಕ್ರೀಡಾಕೂಟದಲ್ಲಿ ವಿವಿಧ ಜಿಲ್ಲೆಗಳಿಂದ ಸರ್ಕಾರಿ ನೌಕರರು ಸ್ಪರ್ಧಿಸಲು ಶಿವಮೊಗ್ಗ ಜಿಲ್ಲೆಗೆ ಈ ಮೇಲ್ಕಂಡ ದಿನಾಂಕಗಳಂದು ಆಗಮಿಸಲಿದ್ದು, ಅವರ ತಂಗುವಿಕೆ ಅನುಕೂಲವಾಗುವಂತೆ ವಿವಿಧ ಇಲಾಖೆಗಳ ಸರ್ಕಾರಿ ವಸತಿ ವಸತಿಗೃಹಗಳನ್ನು ಮತ್ತು ವಿದ್ಯಾರ್ಥಿನಿಲಯಗಳನ್ನು ಕಾಯ್ದಿರಿಸಿಕೊಡಲು ಜಿಲ್ಲಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಶಾಖೆ, ಶಿವಮೊಗ್ಗರವರು ಕೋರಿರುತ್ತಾರೆ.

ಪ್ರಯುಕ್ತ ರಾಜ್ಯ ಮಟ್ಟದ ಸರ್ಕಾರಿ ನೌಕರರ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಸರ್ಕಾರಿ ನೌಕರರಿಗೆ ವಸತಿ ಸೌಲಭ್ಯ ಕಲ್ಪಿಸಲು ಹಾಸ್ಟಲ್ ಗಳ ಅವಶ್ಯಕತೆಯಿರುವುದರಿಂದ ಶಿವಮೊಗ್ಗ ನಗರದಲ್ಲಿರುವ ಶಾಲಾ ಕಾಲೇಜು ಹಾಗೂ ವಿದ್ಯಾರ್ಥಿನಿಲಯಗಳಿಗೆ ದಿನಾಂಕ:18.05.2025, 19.05.2025, 20.05.2025 ರವರೆಗೆ ಮೂರು (3) ದಿನಗಳ ಕಾಲ ರಜೆ ನೀಡಲು ಕೋರಿದೆ.

ತಮ್ಮ ವಿಶ್ವಾಸಿ

ಜಿಲ್ಲಾಧಿಕಾರಿ
ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.

AC
Issue Circular
14/5